# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1011(1088) |
| ಸದಸ್ಯರ ಹೆಸರು | : | ಶ್ರೀ ಸಿ.ಎನ್.ಮಂಜೇಗೌಡ |
| ಉತ್ತರಿಸುವ ದಿನಾಂಕ | : | 27.08.2026 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳ ನೌಕರರಿಗೆ ಏಕರೂಪ ವೃಂದ ಮತ್ತು ನೇಮಕಾತಿ ನಿಯಮ (C&R Rules) ರೂಪಿಸಲು ಸರ್ಕಾರ ಸಮಿತಿ ರಚಿಸಿರುವುದೇ; | ರಾಜ್ಯದಲ್ಲಿ ಒಟ್ಟು 34 ನಗರಾಭಿವೃದ್ಧಿ ಪ್ರಾಧಿಕಾರಗಳು ಕಾರ್ಯ ನಿರ್ವಹಿಸುತ್ತಿರುತ್ತವೆ. ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮ 1987ರ ಕಲಂ 52(2) ರ ಪ್ರಕಾರ ಸಂಬಂಧಪಟ್ಟ ನಗರಾಭಿವೃದ್ಧಿ ಪ್ರಾಧಿಕಾರವೇ ನೇಮಕ/ಶಿಸ್ತು ಪ್ರಾಧಿಕಾರವಾಗಿರುತ್ತದೆ.<br><br>ರಾಜ್ಯದ ಕೆಲವೊಂದು ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಈಗಾಗಲೇ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿರುತ್ತದೆ. ಆಯಾಯಾ ಪ್ರಾಧಿಕಾರಗಳಲ್ಲಿ ಪ್ರಸ್ತುತ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನುಸಾರ ನೇಮಕಾತಿ ಹೊಂದಿ ಹಾಲಿ ಕಾರ್ಯನಿರ್ವಹಿಸುತ್ತಿರುವ ನೌಕರರುಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಮುಂಬಡ್ತಿ ನೀಡಲಾಗುತ್ತಿದೆ.<br><br>ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987 ರ ಕಲಂ 66(1) ರಲ್ಲಿ ಸರ್ಕಾರವು ನಗರಾಭಿವೃದ್ಧಿ ಪ್ರಾಧಿಕಾರಗಳ ನೌಕರರನ್ನು ಒಂದು ಪ್ರಾಧಿಕಾರದಿಂದ ಮತ್ತೊಂದು ಪ್ರಾಧಿಕಾರಕ್ಕೆ ವರ್ಗಾಯಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಅದರಂತೆ, ನಗರಾಭಿವೃದ್ಧಿ ಪ್ರಾಧಿಕಾರಗಳ ನೌಕರರನ್ನು ಸಾರ್ವಜನಿಕ / ಆಡಳಿತಾತ್ಮಕ ಹಿತದೃಷ್ಟಿಯಿಂದ ಒಂದು ಪ್ರಾಧಿಕಾರದಿಂದ ಮತ್ತೊಂದು ಪ್ರಾಧಿಕಾರಕ್ಕೆ ಸರ್ಕಾರದಿಂದ ವರ್ಗಾಯಿಸಲಾಗುತ್ತಿದೆ. |
| ಆ) | 6 ತಂಗಳ ಒಳಗಾಗಿ ನಿಯಮ ರೂಪಿಸಿ ಜಾರಿಗೆ ತರುವುದಾಗಿ ಸಚಿವರು ನೀಡಿದ್ದ ಭರವಸೆ ಹಾಗೂ ಸಮಿತಿ ರಚಿಸಿ ವರ್ಷಗಳೇ ಕಳೆದಿದ್ದರೂ ಇನ್ನು ನಿಯಮ ಜಾರಿಯಾಗದಿರಲು ಕಾರಣವೇನು; | |

| | | |
|---|---|---|
| | | ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ 34 ನಗರಾಭಿವೃದ್ಧಿ ಪ್ರಾಧಿಕಾರಗಳ ಪೈಕಿ 12 ನಗರಾಭಿವೃದ್ಧಿ ಪ್ರಾಧಿಕಾರಗಳು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಳವಡಿಸಿಕೊಂಡಿದ್ದು, ಇನ್ನುಳಿದ ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳು ಇಲ್ಲದ ಕಾರಣ, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಏಕರೂಪ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲು ಸರ್ಕಾರದ ಆದೇಶ ಸಂಖ್ಯೆ:ನಅಇ 21 ಅಪ್ರಾಸೇ 2014, ದಿ:11.10.2022 ರಲ್ಲಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.<br><br>ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯದ ರಚನೆ ಶಾಸನಬದ್ಧ ಅಧಿಕಾರ ಹೊಂದಲು The Karnataka Town and Country Planning and certain other laws (Amendment) Act, 2025 ನ್ನು ಜಾರಿಗೊಳಿಸಿರುವುದರಿಂದ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿಕಾರಿ / ಸಿಬ್ಬಂದಿಗಳ ನೇಮಕಾತಿ ವಿಧಾನ, ಸೇವಾ ಅರ್ಹತೆ ಮುಂತಾದವುಗಳ ಕುರಿತು ಏಕರೂಪ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987 ಕ್ಕೆ ಸೂಕ್ತ ತಿದ್ದುಪಡಿ ತರುವ ಪ್ರಸ್ತಾವನೆಯು ಪ್ರಸ್ತುತ ಪರಿಶೀಲನಾ ಹಂತದಲ್ಲಿರುತ್ತದೆ |
| ಇ) | ಏಕರೂಪ ನಿಯಮವಿಲ್ಲದೆ ನೌಕರರಿಗೆ ಮುಂಬಡ್ತಿ ಸಿಗದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987 ರ ಕಲಂ 52 (1) ರಲ್ಲಿ ನಗರಾಭಿವೃದ್ಧಿ ಪ್ರಾಧಿಕಾರಗಳ ನೌಕರರಿಗೆ ಸರ್ಕಾರದ ಅನುಮೋದನೆ ಪಡೆದು, ನೇಮಕಾತಿ, ಮುಂಬಡ್ತಿ ಮುಂತಾದ ಸೌಲಭ್ಯಗಳನ್ನು ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ, ನಗರಾಭಿವೃದ್ಧಿ ಪ್ರಾಧಿಕಾರಗಳ ನೌಕರರಿಗೆ ಮುಂಬಡ್ತಿ ನೀಡಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| ಈ) | ಹಾಗಿದ್ದಲ್ಲಿ, ಈ ನಿಯಮಗಳನ್ನು ತಕ್ಷಣವೇ ಅಂತಿಮಗೊಳಿಸಿ ಜಾರಿಗೆ ತರುಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯದ ರಚನೆ ಶಾಸನಬದ್ಧ ಅಧಿಕಾರ ಹೊಂದಲು The Karnataka Town and Country Planning and certain other aws (Amendment) Act, 2025 ನ್ನು ಜಾರಿಗೊಳಿಸಿರುವುದರಿಂದ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿಕಾರಿ / ಸಿಬ್ಬಂದಿಗಳ ನೇಮಕಾತಿ ವಿಧಾನ, ಸೇವಾ ಅರ್ಹತೆ ಮುಂತಾದವುಗಳ ಕುರಿತು ಏಕರೂಪ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987 ಕ್ಕೆ ಸೂಕ್ತ ತಿದ್ದುಪಡಿ ತರುವ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿರುತ್ತದೆ. |

ಸಂಖ್ಯೆ: ನಅಇ 284 ಬೆಂರೂಪ್ರಾ 2026 (ಇ-ಕಡತ)

(ಡಾ. ಯತೀಂದ್ರ ಸಿದ್ದರಾಮಯ್ಯ)
ನಗರಾಭಿವೃದ್ಧಿ ಸಚಿವರು